**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ,ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ:ಸಿ4[3] ಪ್ರೌ.ವೇ. ತಾ 12/2013–14 ದಿನಾಂಕ:03.09.2016

**ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ**
**ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ**

ವಿಷಯ: ಕರ್ನಾಟಕ ರಾಜ್ಯ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಸಹ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡುವ ಬಗ್ಗೆ.

ಉಲ್ಲೇಖ:1.ಶ್ರೀ ಕುಮಾರ್ ನಾಯಕ್, ಅಂದಿನ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ ರವರ ನೇತೃತ್ವದ ಸಮಿತಿ ವರದಿ.

2.ಸರ್ಕಾರದ ಆದೇಶ ಸಂಖ್ಯೆ. ಇಡಿ 78 ಎಸ್‌ಎಲ್‌ಬಿ 2016 ದಿ:15.04.2016.

*****

ಉಲ್ಲೇಖಿತ(1)ರ ಪತ್ರದಲ್ಲಿ ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಸಹ ಶಿಕ್ಷಕರುಗಳು ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡುವ ಬಗ್ಗೆ ಆದೇಶಿಸಲಾಗಿದೆ.

ಆದರೆ, ಕೆಲವು ಜಿಲ್ಲೆಯ ವೇತನ ಬಟವಾಡೆ ಅಧಿಕಾರಿಗಳು ಇನ್ನು ಜೂನ್–2016 ರ ಮಾಹೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ಭತ್ಯೆಯನ್ನು ಮಂಜೂರು ಮಾಡಿಲ್ಲವೆಂದು ಪ್ರೌಢಶಾಲಾ ಸಹ ಶಿಕ್ಷಕರ ಸಂಘದಿಂದ ದೂರು ಬಂದಿರುತ್ತದೆ.

ಉಲ್ಲೇಖ (1) ಮತ್ತು (2) ರ ಪತ್ರದನ್ವಯ ರಾಜ್ಯದಲ್ಲಿನ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಸಹ ಶಿಕ್ಷಕರುಗಳಿಗೆ ಶ್ರೀ ಕುಮಾರ್ ನಾಯಕ್, ಅಂದಿನ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ ಇವರ ಸಮಿತಿಯ ವರದಿಯಲ್ಲಿನ ಶಿಫಾರಸ್ಸಿನ್ವಯ, ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ ಜೂನ್–2016 ರಿಂದ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಸಹ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು ಸರ್ಕಾರ ಅವಕಾಶ ಕಲ್ಪಿಸಲಾಗಿದೆ.

ಅದರಂತೆ ಹೆಚ್ಚುವರಿ ವೇತನ ಭತ್ಯೆ ನೀಡುವ ಜವಾಬ್ದಾರಿ ಆಯಾ ವೇತನ ಬಟವಾಡೆ ಅಧಿಕಾರಿಗಳಿಗೆ ಸಂಬಂಧಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಹೆಚ್ಚುವರಿ ವೇತನ ಭತ್ಯೆಯನ್ನು ನೀಡಲು ನಿಮ್ಮ ಕಾರ್ಯವ್ಯಾಪ್ತಿಯ ವೇತನ ಬಟವಾಡೆ ಅಧಿಕಾರಿಗಳಿಗೆ ಸೂಚಿಸಿರುವಂತೆ ನಿರ್ದೇಶನ ನೀಡಿ, ಕ್ರಮವಹಿಸಿ ಈ ಕಚೇರಿಗೆ ವರದಿ ನೀಡಲು ತಿಳಿಸಿದೆ.

Kumar (signature)
ನಿರ್ದೇಶಕರು(ಪ್ರೌಢ ಶಿಕ್ಷಣ)

**ಪ್ರತಿಯನ್ನು:–**

1.ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ –––––– ಜಿಲ್ಲೆ ಇವರ ಸೂಕ್ತ ಕ್ರಮಕ್ಕಾಗಿ

2)ಅಧ್ಯಕ್ಷರು, ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘ(ರಿ),5ನೇ ಅಡ್ಡರಸ್ತೆ, ರೈಲ್ವೆ ಸಮನಾಂತರ ರಸ್ತೆ,ಕುಮಾರಪಾರ್ಕ್ ಪಶ್ಚಿಮ ಬಡಾವಣೆ, ಶ್ರೀ.ಸುಬ್ರಮಣ್ಯಸ್ವಾಮಿ ದೇವಸ್ಥಾನದ ರಸ್ತೆ, ಬೆಂಗಳೂರು–20 ರವರಿಗೆ ಮಾಹಿತಿಗಾಗಿ

.3.ಕಛೇರಿ ಪ್ರತಿ.

D:\10,15,20 pay.docx